ರಾಜ್ಯದಲ್ಲಿ ಆಸ್ತಿ ಮಾರಲು/ಕೊಳ್ಳಲು ನೋಂದಣಿ ಶುಲ್ಕದಲ್ಲಿ ಹೆಚ್ಚಳ.

ಶ್ರೀ ಅಂಜನಮೂರ್ತಿ(ನೆಲಮಂಗಲ): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಆಸ್ತಿ ಪಾಸ್ತಿಗಳ ನೋಂದಣಿಯ ಬಗ್ಗೆ ಕೆಲವು ಕಾನೂನಿನ ತೊಡಕು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಈ ಕಾನೂನು ತೊಡಕಿನ ನಿವಾರಣೆಗೆ ಸರ್ಕಾರ ಏನು ಕ್ರಮಕೈಗೊಂಡಿದೆ?

ಇ) ನೋಂದಣಿ ಶುಲ್ಕ ಹೆಚ್ಚಾಗಿರುವುದು ಮಾರುವವರಿಗೂ, ಕೊಳ್ಳುವವರಿಗೂ ತೊಂದರೆಯಾಗಿದ್ದು, ಸರ್ಕಾರಕ್ಕೆ ಬರಬೇಕಾದ ಹಣ ವಸೂಲಿ ಕಡಿಮೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಈ) ಹಾಗಿದ್ದಲ್ಲಿ ಸರ್ಕಾರ ಏನು ಕ್ರಮ ತೆಗೆದುಕೊಳ್ಳುವುದು?

ಶ್ರೀ ಹೆಚ್.ಸಿ.ಶ್ರೀಕಂಠಯ್ಯ (ಕಂದಾಯ ಸಚಿವರು):

ಅ) ಹೌದು.

ಆ) ಕರ್ನಾಟಕ ಲ್ಯಾಂಡ್ ರಿಫಾರ್ಮ್ಸ್ ಕಾಯ್ದೆ, ಕರ್ನಾಟಕ ಪರಿಶಿಷ್ಟ ಜಾತಿ : ಪರಿಶಿಷ್ಟ ವರ್ಗಗಳ (ಕೆಲವು ಜಮೀನು ಪರಭಾರೆ ನಿಷೇಧ) ಕಾಯ್ದೆ, ಭೂ ಮಂಜೂರಾತಿ ಕಾಯ್ದೆ, ಸಾಮಾಜಿಕ ನ್ಯಾಯ ದೊರಕಿಸಲು ಜಾರಿಗೊಳಿಸಿದ ಕಾನೂನುಗಳಾಗಿರುತ್ತವೆ.

ಕೆಲವು ಕ್ರಮಗಳು ಇಂದಿನ ಸಾಮಾಜಿಕ ಸ್ಥಿತಿಯಲ್ಲಿ ಅನಿವಾರ್ಯವಾಗಿರುತ್ತದೆ. ಆದರೂ ಈ ವ್ಯವಸ್ಥೆಯನ್ನು ಸಲಭಗೊಳಿಸಲು ಪ್ರಯತ್ನಿಸಲಾಗುತ್ತಿದೆ. ಇವುಗಳನ್ನು ಸರಿಯಾದ ರೀತಿಯಲ್ಲಿ ಜಾರಿಗೊಳಿಸಲು, ಕಂದಾಯ ಇಲಾಖೆಯಲ್ಲಿರುವ ಕಡತಗಳು, ವಹಿಗಳನ್ನು ಪರಿಶೀಲಿಸುವುದು ಅಗತ್ಯವಾಗಿರುತ್ತದೆ. ಆದುದರಿಂದ ಸದರಿ ಕಾಯ್ದೆಯ ಅಡಿಯಲ್ಲಿರುವ ಜಮೀನುಗಳ ನೋಂದಣಿ ಸಮಯದಲ್ಲಿ ತಹಶೀಲ್ದಾರ್‌ರವರಿಂದ ನಿರಾಕ್ಷೇಪಣಾ ಪತ್ರವನ್ನು ಪಡೆಯಲು ಸೂಚಿಸಲಾಗಿದೆ.

ಇ) ಇಲ್ಲ.

ಈ) ಉದ್ಭವಿಸುವುದಿಲ್ಲ.